# <u>ಕರ್ನಾಟಕ ಸರ್ಕಾರ</u>

**ಸಂಖ್ಯೆ:** ಸಿಆಸುಇ 04 ಪಿಹೆಚ್‌ಎಲ್ 2024

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:13.08.2024.

**ಇವರಿಂದ:**
ಸರ್ಕಾರದ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
ವಿಧಾನ ಸೌಧ,

**ಇವರಿಗೆ:**

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
2. ಕಾರ್ಯದರ್ಶಿ, ಕರ್ನಾಟಕ ವಿಧಾನ ಪರಿಷತ್ತು/ ಕರ್ನಾಟಕ ವಿಧಾನಸಭೆ, ವಿಧಾನಸೌಧ, ಬೆಂಗಳೂರು.
3. ಸ್ಥಾನಿಕ ಆಯುಕ್ತರು, ಕರ್ನಾಟಕ ಭವನ, ನವದೆಹಲಿ.
4. ರಾಜ್ಯಪಾಲರ ವಿಶೇಷ ಕಾರ್ಯದರ್ಶಿ, ರಾಜಭವನ, ಬೆಂಗಳೂರು.
5. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು.
6. ಎಲ್ಲಾ ವಿಶ್ವವಿದ್ಯಾನಿಲಯಗಳ ಕುಲಸಚಿವರುಗಳು.
7. ಎಲ್ಲಾ ಜಿಲ್ಲಾಧಿಕಾರಿಗಳು,
8. ಎಲ್ಲಾ ಇಲಾಖಾ ಮುಖ್ಯಸ್ಥರುಗಳು,
9. ಎಲ್ಲಾ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.

**ಮಾನ್ಯರೆ,**

**ವಿಷಯ:** ದಿನಾಂಕ:20.08.2024 ರ ಮಂಗಳವಾರ "ಸದ್ಭಾವನಾ ದಿನ" ವನ್ನಾಗಿ ಆಚರಿಸುವ ಬಗ್ಗೆ.

* * * *

ಎಲ್ಲಾ ಧರ್ಮ, ಭಾಷೆ ಹಾಗೂ ರಾಜ್ಯಗಳ ಜನರಲ್ಲಿ ಸೌಹಾರ್ದತೆಯನ್ನು ಉತ್ತೇಜಿಸಿ ಎಲ್ಲರಲ್ಲೂ ಸದ್ಭಾವನೆಯನ್ನು ಮೂಡಿಸಿ ಹಿಂಸಾಚಾರವನ್ನು ತ್ಯಜಿಸುವಂತೆ ಮಾಡಲು ಪ್ರತಿ ವರ್ಷ ಆಗಸ್ಟ್, 20ರಂದು "ಸದ್ಭಾವನಾ ದಿನ" ಆಚರಿಸಲಾಗುತ್ತಿದೆ. ಅದರಂತೆ ಈ ಸಾಲಿನಲ್ಲಿ ದಿನಾಂಕ:20/08/2024ರಂದು ತಮ್ಮ ಇಲಾಖೆಯ ವ್ಯಾಪ್ತಿಗೆ ಒಳಪಡುವ ಕಛೇರಿಗಳಲ್ಲಿ ಸದ್ಭಾವನಾ ದಿನವನ್ನು ಆಚರಿಸುವುದರೊಂದಿಗೆ ಪ್ರತಿಜ್ಞೆಯನ್ನು ಸ್ವೀಕರಿಸಬೇಕೆಂದು ತಿಳಿಸಲಾಗಿದೆ. ಸದ್ಭಾವನಾ ದಿನಾಚರಣೆಯ ಪ್ರತಿಜ್ಞೆಯ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ. ಈ ಕಾರ್ಯಕ್ರಮವನ್ನು ನಡೆಸಿರುವ ಕುರಿತು ಸರ್ಕಾರಕ್ಕೆ ಅನುಪಾಲನಾ ವರದಿಯನ್ನು ಕಳುಹಿಸಬೇಕೆಂದು ಈ ಮೂಲಕ ತಮ್ಮನ್ನು ಕೋರಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

ಸಂದೀಪ್ ಬಿ.ಕೆ. 13/8/24

**(ಸಂದೀಪ್ ಬಿ.ಕೆ.)**
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ರಾಜಕೀಯ)

**<u>ಪ್ರತಿ :</u>**

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.

# ಸದ್ಭಾವನಾ ದಿನಾಚರಣೆಯ ಪ್ರತಿಜ್ಞೆ

ಜಾತಿ, ಧರ್ಮ, ಪ್ರದೇಶ, ಮತ ಅಥವಾ ಭಾಷೆಯ ಭೇದಭಾವವಿಲ್ಲದೇ ಭಾರತದ ಎಲ್ಲ ಜನತೆಯ ಭಾವೈಕ್ಯ ಮತ್ತು ಸೌಹಾರ್ದಕ್ಕಾಗಿ ಕಾರ್ಯ ನಿರ್ವಹಿಸುತ್ತೇನೆಂದು ನಾನು ಪ್ರತಿಜ್ಞೆ ಮಾಡುತ್ತೇನೆ. ಅಲ್ಲದೇ, ವೈಯಕ್ತಿಕವಾಗಿಯಾಗಲೀ ಅಥವಾ ಸಾಮೂಹಿಕವಾಗಿಯಾಗಲೀ ನಮ್ಮಲ್ಲಿರುವ ಎಲ್ಲ ಭೇದಭಾವಗಳನ್ನು ಹಿಂಸಾಚಾರಕ್ಕೆ ಅವಕಾಶ ನೀಡದೆ ಸಮಾಲೋಚನೆ ಹಾಗೂ ಸಂವಿಧಾನಾತ್ಮಕ ಕ್ರಮಗಳ ಮೂಲಕ ಪರಿಹರಿಸುತ್ತೇವೆಂದು ಸಹ ಪ್ರತಿಜ್ಞೆ ಮಾಡುತ್ತೇನೆ.